ಪ್ರಕರಣ ದಾಖಲಾಗಿದೆ.

## ಕನ್ನಡ ಸಲಹಾ ಸಮಿತಿ ಸದಸ್ಯ ಚಿದಾನಂದ ಸಾಲಿ ಹೇಳಿಕೆ

# ಸಾಹಿತ್ಯ ಪ್ರೌಢಿಮೆ ಮೆರೆದಿದ್ದ ಪಂಜೆ ಮಂಗೇಶರು

ಪ್ರಜಾವಾಣಿ ವಾರ್ತೆ

ಬಳ್ಳಾರಿ: 'ಶಿಕ್ಷಕರಾಗಿದ್ದ ಪಂಜೆ ಮಂಗೇಶರಾಯರು, ಸಾಹಿತ್ಯದ ವಿವಿಧ ಕ್ಷೇತ್ರಗಳಲ್ಲಿ ಪ್ರೌಢಿಮೆ ಮೆರೆದಿದ್ದಾರೆ' ಎಂದು ಕೇಂದ್ರ ಸಾಹಿತ್ಯ ಅಕಾಡೆಮಿಯ ಕನ್ನಡ ಸಲಹಾ ಸಮಿತಿ ಸದಸ್ಯ ಚಿದಾನಂದ ಸಾಲಿ ಹೇಳಿದರು.

ಪಂಜೆ ಮಂಗೇಶರಾಯರ 150ನೇ ಜನ್ಮದಿನಾಚರಣೆ ಅಂಗವಾಗಿ ಕೇಂದ್ರ ಸಾಹಿತ್ಯ ಅಕಾಡೆಮಿ ಹಾಗೂ ಬಳ್ಳಾರಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಸಹಯೋಗದೊಂದಿಗೆ ಬಳ್ಳಾರಿಯ ಕನ್ನಡ ಭವನದಲ್ಲಿ ಶನಿವಾರ ನಡೆದ ವಿಶೇಷ ವಿಚಾರ ಸಂಕಿರಣದಲ್ಲಿ ಮಾತನಾಡಿದ ಅವರು, 'ಕೇಂದ್ರ ಸಾಹಿತ್ಯ ಅಕಾಡೆಮಿಯಿಂದ ಕರ್ನಾಟಕದ 31 ಜಿಲ್ಲೆಗಳಲ್ಲಿಯೂ ವೈವಿಧ್ಯಮಯ ಕನ್ನಡ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು' ಎಂದು ತಿಳಿಸಿದರು.



ಪಂಜೆ ಮಂಗೇಶರಾಯರ 150ನೇ ಜನ್ಮದಿನಾಚರಣೆ ಅಂಗವಾಗಿ ಕೇಂದ್ರ ಸಾಹಿತ್ಯ ಅಕಾಡೆಮಿ ಹಾಗೂ ಬಳ್ಳಾರಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಸಹಯೋಗದೊಂದಿಗೆ ಬಳ್ಳಾರಿಯ ಕನ್ನಡ ಭವನದಲ್ಲಿ ವಿಚಾರ ಸಂಕಿರಣ ನಡೆಯಿತು

ಪಂಜೆ ಮಂಗೇಶರಾಯರ ಬದುಕು ಮತ್ತು ಬರಹ ಕುರಿತು ಡಾ. ಪ್ರಜ್ಞಾ ಮತ್ತಿಹಳ್ಳಿ ವಿಷಯ ಮಂಡಿಸಿದರು.

ಡಾ. ತಾರಿಣಿ ಶುಭದಾಯಿನಿ ಅವರು, ಪಂಜೆ ಮಂಗೇಶರಾಯರ ಹೊಸಗನ್ನಡ ಸಾಹಿತ್ಯದ ಕೊಡುಗೆ ಸ್ಮರಿಸಿದರು. ಮಕ್ಕಳ ಸಾಹಿತಿಗಳಾದ ಡಾ. ಶಿವಲಿಂಗಪ್ಪ ಕೆ. ಹಂದಿಹಾಳು ಅವರು ಪಂಜೆ ಮಂಗೇಶರಾಯರ ಶಿಶು ಸಾಹಿತ್ಯದ ತಾತ್ವಿಕ ನೆಲೆ ಕುರಿತು ವಿಷಯ ಮಂಡಿಸಿದರು.

ಕನ್ನಡ ಸಾಹಿತ್ಯ ಪರಿಷತ್ತು ಜಿಲ್ಲಾಧ್ಯಕ್ಷ ನಿಷ್ಠಿ ರುದ್ರಪ್ಪ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಬಳ್ಳಾರಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಕೇಂದ್ರದ ನೇತ್ರ ಚಿಕಿತ್ಸಾ ವಿಭಾಗದ ಮುಖ್ಯಸ್ಥರಾದ ಡಾ. ಪರಸಪ್ಪ ಬಂದ್ರಕಳ್ಳಿ, ಸಾಹಿತಿ ದಸ್ತಗಿರಿಸಾಬ್ ದಿನ್ನಿ ಇದ್ದರು.

ಪಂಜೆ ಮಂಗೇಶರಾಯರ ಕುರಿತು ಸಭಿಕರು ಸಂವಾದ ನಡೆಸಿದರು. ಎನ್. ಬಸವರಾಜ್ ಪ್ರಾರ್ಥನೆ ಸಲ್ಲಿಸಿದರು. ನಾಗರಾಜ್ ಬಸರಕೋಡು ಕಾರ್ಯಕ್ರಮ ನಿರೂಪಿಸಿದರು.